# ವಿದ್ಯಾಸಿರಿ



## ವಿದ್ಯಾಸಿರಿ
ಓದುವ ಕನಸಿಗೆ ನೆರವು...

ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅತೀ ಹೆಚ್ಚಿನ ಬೇಡಿಕೆ ಇರುವುದರಿಂದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ದೊರಕದ ಹಾಗೂ ಮೆರಿಟ್ ಹೊಂದಿರುವ ವಿದ್ಯಾರ್ಥಿಗಳಿಗೆ 'ಊಟ ವಸತಿ ಸಹಾಯ ಯೋಜನೆ'ಯನ್ನು 'ವಿದ್ಯಾಸಿರಿ' ಹೆಸರಿನಲ್ಲಿ ಸರ್ಕಾರ ಜಾರಿಗೆ ತಂದಿದೆ.

ಹಿಂದುಳಿದ ವಿದ್ಯಾರ್ಥಿಗಳ ಊಟ ಹಾಗೂ ವಸತಿಗಾಗಿ ರೂಪುಗೊಂಡಿರುವ 'ವಿದ್ಯಾಸಿರಿ' ಯೋಜನೆ 2013ರ ಅಕ್ಟೋಬರ್ 1ರಿಂದ ರಾಜ್ಯಾದ್ಯಂತ ಜಾರಿಗೊಂಡಿದೆ. 2013-14ನೇ ಸಾಲಿನಲ್ಲಿ ಸರ್ಕಾರಿ/ಅನುದಾನಿತ ಹಾಸ್ಟೆಲ್, ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದ ಹಾಗೂ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿದ್ದ ರಾಜ್ಯದ 32 ಸಾವಿರ ವಿದ್ಯಾರ್ಥಿಗಳಿಗೆ ಈ ಯೋಜನೆಯಿಂದ ಪ್ರಯೋಜನವಾಗಿತ್ತು. ಈ ಯೋಜನೆಗೆ ವಿದ್ಯಾರ್ಥಿಗಳಿಂದ ಹೆಚ್ಚಿನ ಬೇಡಿಕೆ ಬಂದಿದ್ದರ ಹಿನ್ನೆಲೆಯಲ್ಲಿ 2014-15ನೇ ಸಾಲಿನಿಂದ ಇದನ್ನು 50 ಸಾವಿರ ವಿದ್ಯಾರ್ಥಿಗಳಿಗೆ ಹೆಚ್ಚಿಸಿದೆ.

ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಈ ಯೋಜನೆಯಡಿ ಮಾಸಿಕ 1,500 ರೂ.ಗಳಂತೆ ಹತ್ತು ತಿಂಗಳು ಸಹಾಯಧನವನ್ನು ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ವಾರ್ಷಿಕ ವರಮಾನ ಪ್ರವರ್ಗ-1ರ ವಿದ್ಯಾರ್ಥಿಗಳು 2.50 ಲಕ್ಷ ರೂ., ಪ್ರವರ್ಗ-2, 3ಎ, 3ಬಿ ವಿದ್ಯಾರ್ಥಿಗಳಿಗೆ ರೂ. 1 ಲಕ್ಷ ರೂಪಾಯಿ. ವಿದ್ಯಾರ್ಥಿಗಳು ಗ್ರಾಮೀಣ ಭಾಗದವರಾಗಿರಬೇಕು. ಕುಟುಂಬದ ಇಬ್ಬರು ಗಂಡು ಮಕ್ಕಳಿಗೆ ಮಾತ್ರ ಯೋಜನೆ ಅನ್ವಯ. ಹೆಣ್ಣುಮಕ್ಕಳಿಗೆ ಈ ನಿರ್ಬಂಧ ಇಲ್ಲ.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ 'ವಿದ್ಯಾಸಿರಿ' ಯೋಜನೆಯನ್ನು ಸರ್ಕಾರ 2014-15ನೇ ಸಾಲಿನಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೂ ಸಹ ವಿಸ್ತರಿಸಿದೆ. ಜೊತೆಗೆ, ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರೆಯದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಹಾಗೂ ಪಿಹೆಚ್‌ಡಿ ಮಾಡುತ್ತಿರುವ 50 ಸಾವಿರ ವಿದ್ಯಾರ್ಥಿಗಳಿಗೂ ವಿಸ್ತರಿಸುತ್ತಿದೆ. ಇದಕ್ಕಾಗಿ 75 ಕೋಟಿ ರೂ.ಗಳನ್ನು ಒದಗಿಸಿದೆ

